# ಕರ್ನಾಟಕ ವಿಧಾನ ಪರಿಷತ್ತು

## 157ನೇ ಅಧಿವೇಶನ

## ಸಂತಾಪ ಸೂಚನೆಗಳು

**ಮಾನ್ಯ ಸಭಾಪತಿಯವರು:-**

ವಿಧಾನ ಪರಿಷತ್ತಿನ ಮಾಜಿ ಸದಸ್ಯರಾಗಿದ್ದ ಕೆ. ನರಹರಿ, ವಿಧಾನ ಪರಿಷತ್ತಿನ ಹಾಗೂ ವಿಧಾನ ಸಭೆಯ ಮಾಜಿ ಸದಸ್ಯರಾಗಿದ್ದ ಆರ್.ವಿ. ದೇವರಾಜ್, ಮಾಜಿ ಲೋಕಸಭಾ ಸದಸ್ಯರು, ಮಾಜಿ ಸಚಿವರು ಹಾಗೂ ವಿಧಾನ ಸಭೆ ಹಾಲಿ ಸದಸ್ಯರಾಗಿದ್ದ ಹುಲ್ಲಪ್ಪ ಯಮನಪ್ಪ ಮೇಟಿ, ಖ್ಯಾತ ಜಾನಪದ ತಜ್ಞ ಹಾಗೂ ಸಾಹಿತಿಯಾಗಿದ್ದ ಡಾ: ಎನ್.ಆರ್. ನಾಯಕ, ಖ್ಯಾತ ಕಾದಂಬರಿಕಾರರಾಗಿದ್ದ ಎಸ್.ಎಲ್. ಭೈರಪ್ಪ, ಹಿರಿಯ ಪತ್ರಕರ್ತರಾಗಿದ್ದ ಟಿ.ಜೆ.ಎಸ್. ಜಾರ್ಜ್, ಪ್ರಸಿದ್ಧ ಸುಗಮ ಸಂಗೀತ ಗಾಯಕಿಯಾಗಿದ್ದ ಅನುರಾಧಾ ಧಾರೇಶ್ವರ, ಪರಿಸರಸಂರಕ್ಷಿಯಾಗಿದ್ದ ಸಾಲುಮರದ ತಿಮ್ಮಕ್ಕ, ಮಾಜಿ ಸಂಸದರು, ಖ್ಯಾತ ನಟ ಹಾಗೂ ನಿರ್ಮಾಪಕರಾಗಿದ್ದ ಧರ್ಮೇಂದ್ರ ಹಾಗೂ ಹಿರಿಯ ಹಾಸ್ಯ ನಟರಾಗಿದ್ದ ಮೈಸೂರು ಶ್ರೀಕಂಠಯ್ಯ ಉಮೇಶ್ ಅವರುಗಳು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.

### 1. ಕೆ. ನರಹರಿ

ವಿಧಾನ ಪರಿಷತ್ತಿನ ಮಾಜಿ ಸದಸ್ಯರಾಗಿದ್ದ **ಕೆ. ನರಹರಿ ಅವರು ದಿನಾಂಕ:08.10.2025ರಂದು ನಿಧನ ಹೊಂದಿರುತ್ತಾರೆ.**

1932ರ ಮೇ 25ರಂದು ಮೈಸೂರಿನಲ್ಲಿ ಜನಿಸಿದ್ದ ಶ್ರೀಯುತರು ಬಿ.ಎಸ್ಸಿ ಮತ್ತು ಬಿ.ಇ. ಪದವೀಧರರಾಗಿದ್ದು, ವೃತ್ತಿಯಲ್ಲಿ ಸಹಾಯಕ ಪ್ರಾಧ್ಯಪಕರಾಗಿದ್ದರು. ಶ್ರೀಯುತರು

ಸುಮಾರು 24 ವರ್ಷಗಳ ಕಾಲ ಬಿಎಂಎಸ್ ಎಂಜಿನಿಯರಿಂಗ್ ಕಾಲೇಜಿನ ಪ್ರಾಧ್ಯಾಪಕರಾಗಿ, ಮತ್ತು ಸ್ಟುಡೆಂಟ್ಸ್ ವೆಲ್‌ಫೇರ್ ಆಫೀಸರ್ ಆಗಿ, ಹಾಸ್ಟೆಲ್ ಸಮಿತಿಯ ಸದಸ್ಯರಾಗಿ ಅನೇಕ ವರ್ಷಗಳ ಕಾಲ ಕಾಲೇಜಿನ ಉದ್ಯೋಗಿಗಳ ಕಲ್ಯಾಣ ಸಂಘದ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದರು. 1984, 1990 ಮತ್ತು 1996ರಲ್ಲಿ ಸತತವಾಗಿ ಮೂರು ಬಾರಿ ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್ತಿನ ಶಾಸಕರಾಗಿ ಸೇವೆ ಸಲ್ಲಿಸಿರುತ್ತಾರೆ. ತಮ್ಮ ವಾಸದ ಮನೆಯನ್ನು ಶಿಕ್ಷಣ ಸಂಸ್ಥೆಗೆ ಉಚಿತವಾಗಿ ನೀಡಿರುವುದು ಶ್ರೀಯುತರ ಶ್ರೇಷ್ಠ ದಾನಗುಣಕ್ಕೆ ಸಾಕ್ಷಿಯಾಗಿರುತ್ತದೆ.

ಶ್ರೀಯುತರು ಅಖಿಲ ಭಾರತ ರಾಷ್ಟ್ರೀಯ ಶೈಕ್ಷಿಕ ಮಹಾಸಂಘದ ಮುಖ್ಯಸ್ಥರಾಗಿ, ಬೆಂಗಳೂರಿನ ದಿ ಮಿಥಿಕ್ ಸೊಸೈಟಿಯ ಅಧ್ಯಕ್ಷರಾಗಿ, ಭಾರತೀಯ ಶಿಕ್ಷಣ ಮಂಡಳಿಯ ಉಪಾಧ್ಯಕ್ಷರಾಗಿ, ಕರ್ನಾಟಕ ರಾಜ್ಯ ಮಾಧ್ಯಮಿಕ ಶಿಕ್ಷಕರ ಅಸೋಸಿಯೇಷನ್ ಸಂಘಟನಾ ಕಾರ್ಯದರ್ಶಿಯಾಗಿ ವಿವಿಧ ಜವಾಬ್ದಾರಿಯನ್ನು ವಹಿಸಿದ್ದರು. ಶ್ರೀಯುತರು ಶಿಕ್ಷಣ ಕ್ಷೇತ್ರವಲ್ಲದೆ ಸಾಂಸ್ಕೃತಿಕ, ಸಮಾಜ ಸೇವೆ, ರಾಜಕೀಯ ಇತ್ಯಾದಿ ಕ್ಷೇತ್ರಗಳಲ್ಲಿ ಹೆಚ್ಚಿನ ಜ್ಞಾನ ಹೊಂದಿ ಬಹುಮುಖ ಪ್ರತಿಭೆಯಾಗಿ ಗುರುತಿಸಿಕೊಂಡಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಸರಳ ಸಜ್ಜನ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

## 2. ಆರ್.ವಿ. ದೇವರಾಜ್

ವಿಧಾನ ಪರಿಷತ್ತು ಹಾಗೂ ವಿಧಾನ ಸಭೆಯ ಮಾಜಿ ಶಾಸಕರಾಗಿದ್ದ **ಆರ್.ವಿ. ದೇವರಾಜ್** ಅವರು ದಿನಾಂಕ:01.12.2025ರಂದು ನಿಧನ ಹೊಂದಿರುತ್ತಾರೆ.

1957ರ ಡಿಸೆಂಬರ್ 3ರಂದು ಬೆಂಗಳೂರಿನಲ್ಲಿ ಜನಿಸಿದ್ದ ಶ್ರೀಯುತರು ವೃತ್ತಿಯಲ್ಲಿ ವ್ಯಾಪಾರಸ್ಥರಾಗಿದ್ದರು. 9, 11 ಮತ್ತು 14ನೇ ವಿಧಾನ ಸಭೆಯ ಸದಸ್ಯರಾಗಿ, 2004-2005ರಲ್ಲಿ ವಿಧಾನ ಸಭೆ ಸದಸ್ಯರಿಂದ ಚುನಾಯಿತರಾಗಿ ವಿಧಾನ ಪರಿಷತ್ ಸದಸ್ಯರಾಗಿ, ಎರಡು ಬಾರಿ

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾಗಿ, 2016 ರಿಂದ 2018ರವರೆಗೆ ಕರ್ನಾಟಕ ಕೊಳಗೇರಿ ಮಂಡಳಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಶ್ರೀಯುತರು ಉಚಿತ ಸಾಮೂಹಿಕ ವಿವಾಹ ಮತ್ತು ಮಹಿಳಾ ಕೌಶಲ್ಯಾಭಿವೃದ್ಧಿಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ**

## 3. ಹುಲ್ಲಪ್ಪ ಯಮನಪ್ಪ ಮೇಟಿ

ವಿಧಾನ ಸಭೆಯ ಹಾಲಿ ಸದಸ್ಯರಾಗಿದ್ದ **ಹುಲ್ಲಪ್ಪ ಯಮನಪ್ಪ ಮೇಟಿ ಅವರು ದಿನಾಂಕ:04.11.2025ರಂದು ನಿಧನ ಹೊಂದಿರುತ್ತಾರೆ.**

1946ರ ಅಕ್ಟೋಬರ್, 9ರಂದು ಬಿಜಾಪುರ ಜಿಲ್ಲೆಯಲ್ಲಿ ಜನಿಸಿದ್ದ ಶ್ರೀಯುತರು 8ನೇ ತರಗತಿಯವರೆಗೆ ವ್ಯಾಸಂಗ ಮಾಡಿದ್ದು, ವೃತ್ತಿಯಲ್ಲಿ ಕೃಷಿಕರಾಗಿದ್ದರು. ಶ್ರೀಯುತರು 1968ರಲ್ಲಿ ಬಿಲ್‌ಕೆರೂರು ಮಂಡಳ ಪಂಚಾಯತಿ ಅಧ್ಯಕ್ಷರಾಗಿ ರಾಜಕೀಯ ಜೀವನ ಆರಂಭಿಸಿ, 1985ರಲ್ಲಿ ಬಾಗಲಕೋಟೆ ತಾಲ್ಲೂಕು ಹುಟ್ಟುವಳಿ ಮಾರಾಟ ಸಮಿತಿಯ ಅಧ್ಯಕ್ಷರಾಗಿ, 1985–90ರ ಅವಧಿಯಲ್ಲಿ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷರಾಗಿ, ಎಪಿಎಂಸಿ ನಿರ್ದೇಶಕರಾಗಿ, ಎಂ.ಎಸ್.ಐ.ಎಲ್.ನ ಅಧ್ಯಕ್ಷರಾಗಿ, ಬಾಗಲಕೋಟೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದರು. 1989ರಲ್ಲಿ ಗುಳೆದಗುಡ್ಡ ಕ್ಷೇತ್ರದಿಂದ ಸ್ಪರ್ಧಿಸಿ ಮೊದಲ ಬಾರಿಗೆ ವಿಧಾನ ಸಭೆಯ ಶಾಸಕರಾಗಿ ರಾಜಕೀಯ ಪ್ರವೇಶಿಸಿದ ಶ್ರೀಯುತರು 9, 10, 12, 14 ಹಾಗೂ 16ನೇ ವಿಧಾನ ಸಭೆಯ ಶಾಸಕರಾಗಿ, 1996–1998ರವರೆಗೆ ಲೋಕಸಭೆಯ ಸದಸ್ಯರಾಗಿ ಸೇವೆ ಸಲ್ಲಿಸಿರುತ್ತಾರೆ. ಶ್ರೀ ಹೆಚ್.ಡಿ. ದೇವೇಗೌಡರವರ ಸಂಪುಟದಲ್ಲಿ ಅರಣ್ಯ ಸಚಿವರಾಗಿ ಹಾಗೂ ಶ್ರೀ ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಅಬಕಾರಿ ಸಚಿವರಾಗಿ ಕಾರ್ಯನಿರ್ವಹಿಸಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

## 4. ಡಾ: ಎನ್.ಆರ್. ನಾಯಕ

ಖ್ಯಾತ ಜನಪದ ವಿದ್ವಾಂಸ, ನಾಟಕಕಾರ, ಕವಿ ಹಾಗೂ ಸಾಹಿತಿಯಾಗಿದ್ದ **ಡಾ:ಎನ್.ಆರ್. ನಾಯಕ** ಅವರು ದಿನಾಂಕ:14.09.2025ರಂದು ನಿಧನ ಹೊಂದಿರುತ್ತಾರೆ.

1935ರ ಜೂನ್ 28ರಂದು ಉತ್ತರ ಕನ್ನಡ ಜಿಲ್ಲೆ ಅಂಕೋಲಾ ತಾಲ್ಲೂಕಿನ ಭಾವಿಕೇರಿಯಲ್ಲಿ ಜನಿಸಿದ್ದ ಶ್ರೀಯುತರು ಬಿ.ಎ. ಪದವೀಧರರಾಗಿದ್ದು, ವೃತ್ತಿಯಲ್ಲಿ ಅಧ್ಯಾಪಕರಾಗಿದ್ದರು. ಜನಪದ ಸಾಹಿತ್ಯದಲ್ಲಿ ಆಸಕ್ತಿ ಹೊಂದಿದ್ದ ಶ್ರೀಯುತರು ಸುಗ್ಗಿ ಕುಣಿತ, ಗುಮಟೆ ಪಾಂಗು, ಯಕ್ಷಗಾನ ಕಲೆಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದರು. 1983ರಲ್ಲಿ ಜಾನಪದ ದೀಪಾರಾಧನೆ ಎನ್ನುವ ಸಾಂಸ್ಕೃತಿಕ ಸಂಸ್ಥೆಯನ್ನು ಸ್ಥಾಪಿಸಿದ್ದ ಶ್ರೀಯುತರು ಜಾನಪದ ಸಮ್ಮೇಳನ ಹಾಗೂ ಇತರೆ ಗೋಷ್ಠಿಗಳ ಅಧ್ಯಕ್ಷತೆಯನ್ನು ವಹಿಸಿದ್ದರು. ಶ್ರೀಯುತರ ಅನೇಕ ಕೃತಿಗಳು ವಿಶ್ವವಿದ್ಯಾಲಯಗಳ ಪಠ್ಯಪುಸ್ತಕಗಳಾಗಿ ಮನ್ನಣೆ ಪಡೆದುಕೊಂಡಿರುತ್ತವೆ. ಕರ್ನಾಟಕ ಜಾನಪದ ಮತ್ತು ಯಕ್ಷಗಾನ ಅಕಾಡೆಮಿಯಿಂದ 'ಜಾನಪದ ತಜ್ಞ', ಕರ್ನಾಟಕ ಸರ್ಕಾರ ರಾಜ್ಯೋತ್ಸವ ಪ್ರಶಸ್ತಿ, ದೆಹಲಿಯ ಕರ್ನಾಟಕ ಸಂಘದಿಂದ ಪ್ರಶಸ್ತಿ, ಗೊರುಚ ಪ್ರಶಸ್ತಿ ಹಾಗೂ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಶ್ರೀಯುತರು ಭಾಜನರಾಗಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಜಾನಪದ ಕಲಾವಿದರೊಬ್ಬರನ್ನು ಕಳೆದುಕೊಂಡಂತಾಗಿದೆ.**

## 5. ಎಸ್.ಎಲ್. ಭೈರಪ್ಪ

ಕಾದಂಬರಿಕಾರರು, ತತ್ವಜ್ಞಾನಿ ಮತ್ತು ಚಿತ್ರಕಥೆಗಾರರಾಗಿದ್ದ **ಪದ್ಮಭೂಷಣ ಎಸ್.ಎಲ್. ಭೈರಪ್ಪ** ಅವರು ದಿನಾಂಕ:24.09.2025ರಂದು ನಿಧನ ಹೊಂದಿರುತ್ತಾರೆ.

1931ರ ಆಗಸ್ಟ್, 20ರಂದು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ಸಂತೇಶಿವರ ಗ್ರಾಮದಲ್ಲಿ ಜನಿಸಿದ್ದ ಶ್ರೀಯುತರು ಬಿಎ(ಆನರ್ಸ್) ಹಾಗೂ ತತ್ವಶಾಸ್ತ್ರ ಸ್ನಾತಕೋತ್ತರ ಪದವೀಧರರಾಗಿದ್ದು, ಬರೋಡಾದ ಮಹಾರಾಜ ಸಯ್ಯಾಜಿರಾವ್ ವಿಶ್ವವಿದ್ಯಾಲಯದಿಂದ "ಸತ್ಯ

ಮತ್ತು ಸೌಂದರ್ಯ" ಎಂಬ ಪ್ರಬಂಧಕ್ಕೆ ಪಿ.ಹೆಚ್.ಡಿ ಪದವಿಯನ್ನು ಪಡೆದಿದ್ದರು. ಶ್ರೀಯುತರು ಹುಬ್ಬಳ್ಳಿಯ ಶ್ರೀ ಕಾಡುಸಿದ್ದೇಶ್ವರ ಕಾಲೇಜು, ಗುಜರಾತ್‌ನ ಸರ್ದಾರ್ ಪಟೇಲ್ ವಿಶ್ವವಿದ್ಯಾಲಯ, ದೆಹಲಿಯ ಎನ್‌ಸಿಇಆರ್‌ಟಿ ಮತ್ತು ಮೈಸೂರಿನ ಪ್ರಾದೇಶಿಕ ಶಿಕ್ಷಣ ಕಾಲೇಜಿನಲ್ಲಿ ತರ್ಕ ಮತ್ತು ಮನೋವಿಜ್ಞಾನದ ಉಪನ್ಯಾಸಕರಾಗಿ ಕಾರ್ಯನಿರ್ವಹಿಸಿ, 1991ರಲ್ಲಿ ನಿವೃತ್ತರಾಗಿದ್ದರು.

1955ರಲ್ಲಿ ಮೊದಲ ಕೃತಿ ಗತ ಜ್ಞಾನ ಮತ್ತೆರಡು ಕಥೆಗಳ ಮೂಲಕ ಸಾಹಿತ್ಯದ ಹಲವು ಪ್ರಕಾರಗಳಲ್ಲಿ ಕೃಷಿ ಮಾಡಿದ ಅವರು 1958ರಲ್ಲಿ ಮೊದಲ ಕಾದಂಬರಿ ಭೀಮಕಾಯ ಪ್ರಕಟಣೆಯ ಮೂಲಕ 25 ಕಾದಂಬರಿಗಳು ಸೇರಿದಂತೆ 30ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದಾರೆ. ಶ್ರೀಯುತರ ಕೃತಿಗಳನ್ನು ಇಂಗ್ಲಿಷ್, ಕನ್ನಡ ಮತ್ತು ಸಂಸ್ಕೃತ ಭಾಷೆಗಳಲ್ಲಿ ಪ್ರಕಟಿಸಲಾಗಿದೆ. ಶ್ರೀಯುತರ ವಂಶವೃಕ್ಷ, ತಬ್ಬಲಿಯು ನೀನಾದೆ ಮಗನೆ, ಮತದಾನ ಮತ್ತು ನಾಯಿ ನೆರಳುಗಳು ವಿಮರ್ಶಾತ್ಮಕ ಮೆಚ್ಚುಗೆಯನ್ನು ಪಡೆದ ಚಲನಚಿತ್ರಗಳಾಗಿ ನಿರ್ಮಾಣಗೊಂಡು 1966ರಲ್ಲಿ ವಂಶವೃಕ್ಷ ಕೃತಿಗೆ ಕನ್ನಡ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, 1965ರಲ್ಲಿ ದಾತು(ಕ್ರಾಸಿಂಗ್ ಓವರ್) ಕನ್ನಡ ಮತ್ತು ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿಗಳು ಲಭಿಸಿತು.

ಶ್ರೀಯುತರ ಕಾದಂಬರಿಗಳಲ್ಲಿ ಅತ್ಯಂತ ವಿಮರ್ಶಾತ್ಮಕವಾಗಿ ಮೆಚ್ಚುಗೆ ಪಡೆದ ಪರ್ವ, ಮಹಾಭಾರತದ ಮಹಾಕಾವ್ಯದಲ್ಲಿನ ಸಾಮಾಜಿಕ ರಚನೆ, ಮೌಲ್ಯಗಳು ಮತ್ತು ಮರಣವನ್ನು ಅದ್ಭುತವಾಗಿ ನಿರೂಪಿಸಲಾಗಿದೆ.

ಶ್ರೀಯುತರು ಸಾಹಿತ್ಯ ಲೋಕಕ್ಕೆ ನೀಡಿರುವ ಅಪಾರ ಕೊಡುಗೆಗಾಗಿ ಪದ್ಮಭೂಷಣ, ಪದ್ಮಶ್ರೀ ಪ್ರಶಸ್ತಿ, ಸಾಹಿತ್ಯ ಅಕಾಡೆಮಿ ಪ್ರಶಸ್ತಿಗಳಲ್ಲದೆ ಇತರೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಖ್ಯಾತ ಲೇಖಕರೊಬ್ಬರನ್ನು ಕಳೆದುಕೊಂಡಂತಾಗಿದೆ.**

## 6. ಟಿ.ಜೆ.ಎಸ್. ಜಾರ್ಜ್

ಹಿರಿಯ ಪತ್ರಕರ್ತ, ಲೇಖಕರು ಹಾಗೂ ಜನಪ್ರಿಯ ಅಂಕಣಕಾರರಾಗಿದ್ದ ಪದ್ಮಭೂಷಣ **ಟಿ.ಜೆ.ಎಸ್. ಜಾರ್ಜ್** ಅವರು ದಿನಾಂಕ:03.10.2025ರಂದು ನಿಧನ ಹೊಂದಿರುತ್ತಾರೆ.

1928ರ ಮೇ 7ರಂದು ಕೇರಳದಲ್ಲಿ ಜನಿಸಿದ್ದ ಶ್ರೀಯುತರು ಇಂಗ್ಲೀಷ್ ಸಾಹಿತ್ಯದಲ್ಲಿ ಆನರ್ಸ್ ಪದವೀಧರರಾಗಿದ್ದು, ವೃತ್ತಿಯಲ್ಲಿ ಲೇಖಕರಾಗಿದ್ದರು. 1950ರಲ್ಲಿ ಮುಂಬೈನಲ್ಲಿರುವ ದಿ ಫ್ರೀ ಪ್ರೆಸ್ ಜರ್ನಲ್‌ನಲ್ಲಿ ಪತ್ರಿಕೋದ್ಯಮ ವೃತ್ತಿಜೀವನವನ್ನು ಪ್ರಾರಂಭಿಸಿ, ಇಂಟರ್‌ನ್ಯಾಷನಲ್ ಪ್ರೆಸ್ ಇನ್ಸ್ಟಿಟ್ಯೂಟ್, ದಿ ಸರ್ಚ್‌ಲೈಟ್ ಮತ್ತು ಫಾರ್ ಈಸ್ಟರ್ನ್ ಎಕನಾಮಿಕ್ ರಿವ್ಯೂ ಮೂಲಕ ಏಷ್ಯಾವೀಕ್(ಹಾಂಗ್ ಕಾಂಗ್)ನ ಸ್ಥಾಪಕ ಸಂಪಾದಕರಾಗಿ, ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್‌ನ ಸಂಪಾದಕೀಯ ಸಲಹೆಗಾರರಾಗಿದ್ದರು. ಶ್ರೀಯುತರು ಸಾಮಾಜಿಕ ಅನ್ಯಾಯ, ಭ್ರಷ್ಟಾಚಾರದ ವಿರುದ್ಧ ಹೋರಾಟ ಮತ್ತು ವಿವಿಧ ಮಹತ್ವದ ವಿಚಾರಗಳ ಬಗ್ಗೆ ಜನಪ್ರಿಯ ಸಾಪ್ತಾಹಿಕ "ಪಾಯಿಂಟ್ ಆಫ್ ವ್ಯೂ" ಹೆಸರಿನಲ್ಲಿ 25 ವರ್ಷಗಳ ಕಾಲ ಬರೆದ 1300 ಅಂಕಣಗಳು ಕನ್ನಡಪ್ರಭ ಪತ್ರಿಕೆಯಲ್ಲಿ 'ನೇರಮಾತು' ಹೆಸರಿನಲ್ಲಿ ಪ್ರಕಟವಾಗುತ್ತಿತ್ತು. ಶ್ರೀಯುತರು ಸಂಪಾದಕ, ಅಂಕಣಕಾರ, ಲೇಖಕ ಮತ್ತು ಶಾಶ್ವತ ಪದಶಾಸ್ತ್ರಜ್ಞರಾಗಿರುವುದರ ಜೊತೆಗೆ ತಮ್ಮ ತೀಕ್ಷ್ಣವಾದ ಲೇಖನಿ ಮತ್ತು ರಾಜಿಯಾಗದ ಧ್ವನಿಯಿಂದ ಆರು ದಶಕಗಳ ಕಾಲ ಭಾರತೀಯ ಪತ್ರಿಕೋದ್ಯಮವನ್ನು ಶ್ರೀಮಂತ ಗೊಳಿಸಿದ್ದಾರೆ.

ಶ್ರೀಯುತರು ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಅತ್ಯುತ್ತಮ ಕೊಡುಗೆಗಾಗಿ ಭಾರತ ಸರ್ಕಾರವು ಪದ್ಮಭೂಷಣ ಪ್ರಶಸ್ತಿ ನೀಡಿ ಗೌರವಿಸಿರುತ್ತದೆ. ಕೇಸರಿ ಮಾಧ್ಯಮ ಪ್ರಶಸ್ತಿ, ಕಮಲಾ ಸುರಯ್ಯ ಪ್ರಶಸ್ತಿ, ಅಜೀಕೋಡು ಪ್ರಶಸ್ತಿ, ಬಶೀರ್ ಪುರಸ್ಕಾರಂ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ, ಮೊಹಮ್ಮದ್ ಕೋಯಾ ಪತ್ರಿಕೋದ್ಯಮ ಪ್ರಶಸ್ತಿ ಹಾಗೂ ಪತ್ರಿಕಾ ಅಕಾಡೆಮಿ ಪ್ರಶಸ್ತಿಗಳಲ್ಲದೆ ಇತರೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಪತ್ರಕರ್ತರು ಹಾಗೂ ಲೇಖಕರೊಬ್ಬರನ್ನು ಕಳೆದುಕೊಂಡಂತಾಗಿದೆ.**

# 7. ಅನುರಾಧಾ ಧಾರೇಶ್ವರ

ಖ್ಯಾತ ಸುಗಮ ಸಂಗೀತ ಗಾಯಕಿಯಾಗಿದ್ದ **ಅನುರಾಧಾ ಧಾರೇಶ್ವರ** ಅವರು ದಿನಾಂಕ:09.10.2025ರಂದು ನಿಧನ ಹೊಂದಿರುತ್ತಾರೆ.

1938ರ ನವೆಂಬರ್ 26ರಂದು ಹುಬ್ಬಳ್ಳಿಯಲ್ಲಿ ಜನಿಸಿದ್ದ ಶ್ರೀಯುತರು ಎಸ್.ಎಸ್.ಎಲ್.ಸಿ.ಯವರೆಗೆ ವ್ಯಾಸಂಗ ಮಾಡಿದ್ದು, ಬಾಲ್ಯದಿಂದಲೇ ಶಾಲಾ ಸಮಾರಂಭಗಳಲ್ಲಿ ಹಾಡುತ್ತಾ, ಖ್ಯಾತಗಾಯಕ ಆಕಾಶವಾಣಿ ಕಲಾವಿದ ರಾಮಚಂದ್ರ ಜಂತ್ರಿಯವರಲ್ಲಿ ಶಿಷ್ಯವೃತ್ತಿಯನ್ನು ಆರಂಭಿಸಿ, ಶಾಸ್ತ್ರೀಯ ಸಂಗೀತದ ಮಜಲುಗಳು ಹಾಗೂ ಭಾವಗೀತೆಗಳನ್ನು ಕರಗತ ಮಾಡಿಕೊಂಡಿದ್ದರು. ಶ್ರೀಯುತರು 1966ರಲ್ಲಿ ಧಾರವಾಡದ ಆಕಾಶವಾಣಿಯಲ್ಲಿ ಕಾರ್ಯಕ್ರಮ ನಿರೂಪಕಿಯಾಗಿದ್ದರು. "ಏ ಮೇರೆ ವತನ್ ಕೆ ಲೋಗೋ" ಹಿಂದಿ ಹಾಡಿನ ಅನುವಾದವುಳ್ಳ **"ಓ ನನ್ನ ದೇಶಭಾಂದವರೇ"** ಗೀತೆಯನ್ನು ಮೊದಲ ಬಾರಿಗೆ ಆಕಾಶವಾಣಿಯಲ್ಲಿ ಹಾಡಿ ಖ್ಯಾತಗೊಂಡಿದ್ದರು. ಮಹಾನ್ ಗಾಯಕರಾದ ಮಲ್ಲಿಕಾರ್ಜುನ ಮನ್ಸೂರ್ ಅವರ ಸಂಗೀತ ನಿರ್ದೇಶನದ ಹಲವಾರು ಗೀತೆಗಳಿಗೆ ಹಾಡುವುದರ ಮೂಲಕ ಧಾರವಾಡದ ಕೋಗಿಲೆಯಾಗಿ ಸುಪ್ರಸಿದ್ಧರಾಗಿದ್ದ ಶ್ರೀಯುತರು ಕನ್ನಡವಲ್ಲದೆ ಕೊಂಕಣಿ, ಮರಾಠಿ, ಹಿಂದಿ, ಬಂಗಾಳಿ, ತೆಲುಗು ಮುಂತಾದ ಭಾಷೆಯ ಗೀತೆಗಳನ್ನು ಸುಲಲಿತವಾಗಿ ಹಾಡಿ ಬಹು ಭಾಷಾ ಗಾಯಕಿ ಎಂಬ ಬಿರುದು ಪಡೆದಿದ್ದರು.

1988–89ರಲ್ಲಿ ಕರ್ನಾಟಕ ಕಲಾತಿಲಕ ಪ್ರಶಸ್ತಿ, 1995ರಲ್ಲಿ ರಾಜ್ಯೋತ್ಸವ ಪ್ರಶಸ್ತಿ, ಸುಗಮ ಸಂಗೀತ ಕ್ಷೇತ್ರದ ಪರಮೋಚ್ಚ "ಸಂತ ಶಿಶುನಾಳ ಶರೀಫ್ ಪ್ರಶಸ್ತಿ", ಕೊಂಕಣಿ ಭಾಷೆಯಲ್ಲಿನ ಸಂಗೀತ ಸಾಧನೆಗಾಗಿ "ಕಲಾಕಾರ್" ಪ್ರಶಸ್ತಿ ಹಾಗೂ ಗಂಗೂಬಾಯಿ ಹಾನಗಲ್ ರಾಷ್ಟ್ರೀಯ ಪ್ರಶಸ್ತಿಗಳಲ್ಲದೆ ಇತರೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಬಹು ಭಾಷಾ ಸುಗಮ ಸಂಗೀತ ಗಾಯಕಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

## 8. ಸಾಲುಮರದ ತಿಮ್ಮಕ್ಕ

ಪದ್ಮಶ್ರೀ ಹಾಗೂ ನಾಡೋಜ ಪ್ರಶಸ್ತಿ ಪುರಸ್ಕೃತ ಶತಾಯುಷಿ **ಸಾಲುಮರದ ತಿಮ್ಮಕ್ಕ** ಅವರು ದಿನಾಂಕ:14.11.2025ರಂದು ನಿಧನ ಹೊಂದಿರುತ್ತಾರೆ.

1911ರ ಜೂನ್ 30ರಂದು ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕಿನಲ್ಲಿ ಜನಿಸಿದ್ದ ಶ್ರೀಯುತರು ತಾವು ತಾಯಿಯಾಗುವ ಭಾಗ್ಯವಿಲ್ಲವೆಂದು ತಿಳಿದ ಮೇಲೆ ಕುದೂರು-ಹುಲಿಕಲ್ ರಸ್ತೆ ಬದಿಯಲ್ಲಿ ಆಲದ ಮರಗಳ ಸಸಿಗಳನ್ನು ನೆಟ್ಟು ಅವುಗಳನ್ನು ಮಕ್ಕಳಂತೆ ಸಾಕಿ ಪೋಷಣೆ ಮಾಡಿ ಬೆಳೆಸಿದ್ದರು. ಸುಮಾರು ನಾಲ್ಕು ಸಾವಿರಕ್ಕಿಂತ ಹೆಚ್ಚಿನ ಮರಗಳನ್ನು ಬೆಳೆಸುವ ಮೂಲಕ ಸಾಲು ಮರದ ತಿಮ್ಮಕ್ಕ ಎಂದು ಶ್ರೀಯುತರು ಸುಪ್ರಸಿದ್ಧರಾಗಿದ್ದರು.

ಶ್ರೀಯುತರ ಸ್ಫೂರ್ತಿಯಲ್ಲಿ **"ತಿಮ್ಮಕ್ಕ ಮಾತು 284 ಮಕ್ಕಳು"** ಎಂಬ ಸಾಕ್ಷ್ಯಚಿತ್ರವನ್ನು ನಿರ್ಮಿಸಲಾಗಿತ್ತು, ಸದರಿ ಸಾಕ್ಷ್ಯಚಿತ್ರವು 2000ನೇ ಇಸವಿಯ ಅಂತರರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಪ್ರದರ್ಶನಗೊಂಡಿತ್ತು.

ಔಪಚಾರಿಕ ಶಿಕ್ಷಣವನ್ನು ಪಡೆಯದಿದ್ದ ಶ್ರೀಯುತರು ಕೂಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದು, ಪರಿಸರ ಸಂರಕ್ಷಣೆಗೆ ನೀಡಿರುವ ಕೊಡುಗೆಯನ್ನು ಗುರುತಿಸಿ ಭಾರತದ ರಾಷ್ಟ್ರೀಯ ನಾಗರಿಕ ಪ್ರಶಸ್ತಿಯಾದ ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಕರ್ನಾಟಕದ ಕೇಂದ್ರೀಯ ವಿಶ್ವವಿದ್ಯಾಲಯವು 2020ರಲ್ಲಿ ಗೌರವ ಡಾಕ್ಟರೇಟ್ ಪದವಿಯನ್ನು ಘೋಷಿಸಿದೆ. ಇಂದಿರಾ ಪ್ರಿಯದರ್ಶಿನಿ ವೃಕ್ಷ ಮಿತ್ರ ಪ್ರಶಸ್ತಿ, ಕಲ್ಪವಲ್ಲಿ ಪ್ರಶಸ್ತಿ, ಮಹಿಳಾ ರತ್ನ ಪ್ರಶಸ್ತಿ ಹಾಗೂ ರಾಜ್ಯೋತ್ಸವ ಪ್ರಶಸ್ತಿಗಳಲ್ಲದೆ ಇತರೆ ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

2016ರಲ್ಲಿ ಬ್ರಿಟಿಷ್ ಬ್ರಾಡ್‌ಕಾಸ್ಟಿಂಗ್ ಕಾರ್ಪೊರೇಷನ್ ಸಂಸ್ಥೆಯವರು ವಿಶ್ವದ ಅತ್ಯಂತ ಪ್ರಭಾವಶಾಲಿ ಮತ್ತು ಸ್ಫೂರ್ತಿದಾಯಕ ಮಹಿಳೆಯರಲ್ಲಿ ಒಬ್ಬರೆಂದು ಶ್ರೀಯುತರನ್ನು ಸೇರ್ಪಡೆ ಮಾಡಿ, ಭಾರತದಲ್ಲಿ ಅನೇಕ ಅರಣ್ಯೀಕರಣ ಕಾರ್ಯಕ್ರಮಗಳಿಗೆ ಆಹ್ವಾನಿಸಲಾಗುತ್ತಿತ್ತು. ಶ್ರೀಯುತರ ಗ್ರಾಮದಲ್ಲಿ ನಡೆಯುವ ವಾರ್ಷಿಕ ಜಾತ್ರೆಗಾಗಿ ಮಳೆನೀರನ್ನು ಸಂಗ್ರಹಿಸಲು ಟ್ಯಾಂಕ್

ನಿರ್ಮಿಸುವಂತಹ ಇತರ ಸಾಮಾಜಿಕ ಚಟುವಟಿಕೆಗಳಲ್ಲಿಯೂ ಸಹ ತಮ್ಮನ್ನು ತೊಡಗಿಸಿಕೊಂಡಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಹಿರಿಯ ಪರಿಸರಸಂರಕ್ಷಕಿಯೊಬ್ಬರನ್ನು ಕಳೆದುಕೊಂಡಂತಾಗಿದೆ.**

## 9. ಧರ್ಮೇಂದ್ರ

ಹಿಂದಿ ಚಿತ್ರರಂಗದ ನಟ ನಿರ್ಮಾಪಕ ಹಾಗೂ ಮಾಜಿ ಸಂಸದರಾಗಿದ್ದ ಪದ್ಮಭೂಷಣ **ಧರ್ಮೇಂದ್ರ** ಅವರು ದಿನಾಂಕ:24.11.2025ರಂದು ನಿಧನ ಹೊಂದಿರುತ್ತಾರೆ.

1935ರ ಡಿಸೆಂಬರ್ 8ರಂದು ಪಂಜಾಬ್‌ನ ನಸ್ರಾಲಿಯಲ್ಲಿ ಜನಿಸಿದ್ದ ಶ್ರೀಯುತರು ಮೆಟ್ರಿಕ್ಯುಲೇಷನ್‌ವರೆಗೆ ವ್ಯಾಸಂಗ ಮಾಡಿದ್ದು, 1960ರಲ್ಲಿ ಚಲನಚಿತ್ರ ರಂಗಕ್ಕೆ ಪಾದಾರ್ಪಣೆ ಮಾಡಿ 300ಕ್ಕೂ ಅಧಿಕ ಚಿತ್ರಗಳಲ್ಲಿ ನಟಿಸಿದ್ದರು. ಇಂಡಿಯಾಟೈಮ್ಸ್ ಸಾರ್ವಕಾಲಿಕ ಟಾಪ್ 25 ಬಾಲಿವುಡ್ ಚಿತ್ರಗಳ ಪೈಕಿ ಶ್ರೀಯುತರು ನಟಿಸಿದ್ದ ಶೋಲೆ ಚಿತ್ರವನ್ನು ಅತ್ಯುತ್ತಮ ಚಿತ್ರ ಎಂದು ಪರಿಗಣಿಸಿ ವಾರ್ಷಿಕ ಫಿಲ್ಮ್‌ಫೇರ್ ಪ್ರಶಸ್ತಿ ಸಮಾರಂಭದಲ್ಲಿ ವಿಶೇಷ ಪ್ರಶಸ್ತಿಯನ್ನು ನೀಡಲಾಗಿತ್ತು. 1983ರಲ್ಲಿ ವಿಜಯತಾ ಫಿಲ್ಮ್ಸ್ ನಿರ್ಮಾಣ ಕಂಪನಿ ಸ್ಥಾಪಿಸಿ, ಯಶಸ್ವಿ ಚಿತ್ರಗಳನ್ನು ನಿರ್ಮಿಸಿದ್ದರು. ಕನ್ನಡದ ಸಿನಿಮಾಗಳಾದ ಗಂಧದ ಗುಡಿ, ತಾಯಿಗೆ ತಕ್ಕಮಗ, ಹುಲಿ ಹೆಬ್ಬುಲಿ ಚಿತ್ರಗಳನ್ನು ಹಿಂದಿ ಭಾಷೆಗೆ ರೀಮೇಕ್ ಮಾಡಿ ಯಶಸ್ವಿಗೊಳಿಸಿದ್ದರು.

ಶ್ರೀಯುತರು 2004 ರಿಂದ 2009ರವರೆಗೆ ಬಿಕಾನೆರ ಕ್ಷೇತ್ರದಿಂದ ಲೋಕಸಭೆಯ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದರು.

ಶ್ರೀಯುತರು ಕಲೆ ಕ್ಷೇತ್ರದಲ್ಲಿ ನೀಡಿದ ಕೊಡುಗೆಗಾಗಿ ಭಾರತ ಸರ್ಕಾರವು ಪದ್ಮಭೂಷಣ ಪ್ರಶಸ್ತಿ ನೀಡಿ ಗೌರವಿಸಿತು. ಲಿವಿಂಗ್ ಲೆಜೆಂಡ್ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿ, ಅಂತರರಾಷ್ಟ್ರೀಯ ಚಲನಚಿತ್ರೋತ್ಸವದ ಜೀವಮಾನ ಪ್ರಶಸ್ತಿ, ಡಾ: ಬಾಬಾಸಾಹೇಬ್ ಅಂಬೇಡ್ಕರ್ ನೊಬೆಲ್ ಪ್ರಶಸ್ತಿಗಳಲ್ಲದೆ ಇನ್ನು ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ದೇಶವು ಒಬ್ಬ ಅತ್ಯುತ್ತಮ ನಟರನ್ನು ಕಳೆದುಕೊಂಡಂತಾಗಿದೆ.**

## 10. ಮೈಸೂರು ಶ್ರೀಕಂಠಯ್ಯ ಉಮೇಶ್

ಕನ್ನಡ ವೃತ್ತಿರಂಗಭೂಮಿ ಮತ್ತು ಚಲನಚಿತ್ರರಂಗದ ಜನಪ್ರಿಯ ಹಾಸ್ಯ ಕಲಾವಿದರಾಗಿದ್ದ **ಮೈಸೂರು ಶ್ರೀಕಂಠಯ್ಯ ಉಮೇಶ್** ಅವರು ದಿನಾಂಕ:30.11.2025ರಂದು ನಿಧನ ಹೊಂದಿರುತ್ತಾರೆ.

1945ರ ಏಪ್ರಿಲ್ 24ರಂದು ಮೈಸೂರಿನಲ್ಲಿ ಜನಿಸಿದ್ದ ಶ್ರೀಯುತರು ಬಾಲ್ಯದಲ್ಲಿಯೇ ರಂಗಭೂಮಿ ಮತ್ತು ರಂಗ ಪ್ರದರ್ಶನಗಳತ್ತ ಆಕರ್ಷಿತರಾಗಿದ್ದರು. ಶ್ರೀಯುತರು 4ನೇ ವಯಸ್ಸಿನಲ್ಲಿಯೇ ಕೆ.ಹಿರಣ್ಣಯ್ಯ ನಡೆಸುತ್ತಿದ್ದ ಜನಪ್ರಿಯ ರಂಗಭೂಮಿ ತಂಡದಲ್ಲಿ ಹಾಗೂ ಗುಬ್ಬಿ ವೀರಣ್ಣ ಕಂಪನಿಗಳಲ್ಲಿ ಬಾಲ ಕಲಾವಿದರಾಗಿ ವಿವಿಧ ಪಾತ್ರಗಳನ್ನು ನಿರ್ವಹಿಸಿದ್ದರು. 1960ರಲ್ಲಿ ತೆರೆಗೊಂಡ ಮಕ್ಕಳ ರಾಜ್ಯ ಚಿತ್ರದ ಮೂಲಕ ಶ್ರೀಯುತರು ಮೊದಲ ಬಾರಿಗೆ ಬೆಳ್ಳಿತೆರೆಯ ಮೇಲೆ ಕಾಣಿಸಿಕೊಂಡು ಒಟ್ಟು 350ಕ್ಕೂ ಹೆಚ್ಚು ಸಿನಿಮಾಗಳಲ್ಲಿ ವಿವಿಧ ಪಾತ್ರಗಳಲ್ಲಿ ನಟಿಸಿ ಚಿತ್ರ ರಸಿಕರ ಮೆಚ್ಚುಗೆಗೆ ಪಾತ್ರರಾಗಿದ್ದರು.

ಕರ್ನಾಟಕ ರಾಜ್ಯ ಚಲನಚಿತ್ರ ಪ್ರಶಸ್ತಿ, ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ, ಮಹಾನಗರ ಪಾಲಿಕೆ ಪ್ರಶಸ್ತಿ, ವಿಶ್ವೇಶ್ವರಯ್ಯ ಪ್ರತಿಷ್ಠಾನ ಪ್ರಶಸ್ತಿಗಳಲ್ಲದೆ ಇನ್ನು ಹತ್ತು ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ.

**ಶ್ರೀಯುತರ ನಿಧನದಿಂದಾಗಿ ಕನ್ನಡ ಚಲನ ಚಿತ್ರರಂಗದ ಹಿರಿಯ ಹಾಸ್ಯ ನಟರೊಬ್ಬರನ್ನು ಕಳೆದುಕೊಂಡಂತಾಗಿದೆ**

***

**ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-**

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.